ಕಿತ್ತೂರ ಕರ್ನಾಟಕ

# ನೂತನ ಲೋಕಸಭಾ ಕಟ್ಟಡಕ್ಕೆ 'ಅನುಭವ ಮಂಟಪ' ಹೆಸರಿಡಲು ಓಂ ಬಿರ್ಲಾ ಅವರಿಗೆ ಮನವಿ

ಬೆಂಗಳೂರು, ೨೪ : ನವದೆಹಲಿಯಲ್ಲಿ ನೂತನವಾಗಿ ನಿರ್ಮಿಸುತ್ತಿರುವ ಕೇಂದ್ರ ಸರಕಾರದ ಮಹತ್ವಾಕಾಂಕ್ಷೆಯ ಲೋಕಸಭಾ ನೂತನ ಸಂಕೀರ್ಣದ ಕಟ್ಟಡವೊಂದಕ್ಕೆ 'ಅನುಭವ ಮಂಟಪ' ಎಂದು ನಾಮಕರಣ ಮಾಡುವಂತೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಆದ್ಯತಾಪೂರ್ವಕ ಮನವಿ ಮಾಡಿದ್ದಾರೆ.

ಈ ಕುರಿತು ವಿಧಾನ ಸೌಧದಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಮನವಿಯೊಂದನ್ನು ಸಲ್ಲಿಸಿರುವ ಸಭಾಪತಿ ಬಸವರಾಜ ಹೊರಟ್ಟಿ ೧೨ನೇ ಶತಮಾನದಲ್ಲಿ ಅಲ್ಲಮಪ್ರಭು ಮತ್ತು ಬಸವಾದಿ ಶರಣರು ನಿರ್ಮಿಸಿದ ಅನುಭವ ಮಂಟಪ ಇಡೀ ವಿಶ್ವದ ಪ್ರಪ್ರಥಮ ಶಾಸನ ಸಭೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಅಸಮಾನತೆಯನ್ನು ತೊಡೆದು ಹಾಕಿ 'ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು' ಎಂಬ ಸಂದೇಶ ಸಾರುವ ಸಾರ್ವಕಾಲಿಕ ವಿಚಾರಧಾರೆಯ ಅಡಿಯಲ್ಲಿ ನಿರ್ಮಾಣಗೊಂಡಿದ್ದ ಅನುಭವ ಮಂಟಪ ಪ್ರಜಾಪ್ರಭುತ್ವ ಪರಿಕಲ್ಪನೆಗೆ ಮೂಲ ಅಡಿಪಾಯ ಹಾಗೂ ಆಶಯವಾಗಿದೆ. ಸಮಾಜ ಸುಧಾರಕ, ದಾರ್ಶನಿಕ ಹಾಗೂ ಅತ್ಯುತ್ತಮ ಆಡಳಿತಗಾರರಾಗಿದ್ದ ಬಸವಣ್ಣನವರು ತಮ್ಮ ವಚನಗಳ ಮೂಲಕ ಸಾಮಾಜಿಕ ಸಬಲೀಕರಣ, ಸೌಹಾರ್ದತೆ, ಸಹೋದರತ್ವ ಹಾಗೂ ಸಮಾನತೆ ಕುರಿತು ಇಡೀ ಸಮಾಜಕ್ಕೆ ಸಂದೇಶ ನೀಡಿದ್ದಾರೆ. ಅಂತಹ ಮಹಾನ್ ಪುರುಷರು ಪ್ರಜಾಪ್ರಭುತ್ವದ ನೆಲೆಗಟ್ಟಿನಲ್ಲಿ ನಿರ್ಮಿಸಿದ್ದ ಅನುಭವ ಮಂಟಪ ಸರ್ವ ಜಾತಿ, ಜನಾಂಗ ಸಮುದಾಯ ಹಾಗೂ ಲಿಂಗಗಳಿಗೆ ಪ್ರಾತಿನಿಧ್ಯ ನೀಡಿ ಪ್ರಜಾಸತ್ತಾತ್ಮಕ ಮೌಲ್ಯಗಳ ವರ್ಧನೆಯ ಬೀಜಾಂಕುರ ಮಾಡಿದ್ದಾರೆ. ಬಸವಾದಿ ಶರಣರು ರಚಿಸಿರುವ ಅಸಂಖ್ಯಾತ ವಚನಗಳೇ ಇಂದಿನ ಸಂವಿಧಾನದ ಅನುಚ್ಛೇದಗಳಾಗಿ ರೂಪುಗೊಂಡಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.



**ಬೆಂಗಳೂರು, ೨೪ :** ಕರ್ನಾಟಕ ವಿಧಾನಸಭೆಯ ಇತಿಹಾಸದಲ್ಲಿಯೇ ಮೊದಲ ಬಾರಿಗೆ ನೀಡಲಾದ ಅತ್ಯುತ್ತಮ ಶಾಸಕ ಪ್ರಶಸ್ತಿಯನ್ನು ಮೊದಲ ಬಾರಿಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ನೀಡಿ ಸನ್ಮಾನಿಸಲಾಯಿತು. ವಿಧಾನಸಭೆಯಲ್ಲಿ ಶುಕ್ರವಾರ ನಡೆದ ಜಂಟಿ ಅಧಿವೇಶನದಲ್ಲಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಪ್ರಶಸ್ತಿ ನೀಡಿ ಸನ್ಮಾನಿಸಿದರು. ಜಂಟಿ ಅಧಿವೇಶನ ಆರಂಭವಾಗುತ್ತಿದ್ದಂತೆ ಮಾತನಾಡಿದ ವಿಧಾನಸಭಾ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ, ಕರ್ನಾಟಕ ವಿಧಾನಸಭೆಯ ಇತಿಹಾಸದಲ್ಲಿಯೇ ಮೊದಲ ಬಾರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿಯನ್ನು ನೀಡಲಾಗುತ್ತಿದೆ. ಬಿ.ಎಸ್.ಯಡಿಯೂರಪ್ಪ ಅವರ ಹೆಸರನ್ನು ಮೊದಲಿಗೆ ಆಯ್ಕೆ ಮಾಡಬೇಕು ಎಂದು ಸರ್ವಾನುಮತದಿಂದ ನಿರ್ಣಯ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಯಡಿಯೂರಪ್ಪ ಅವರು ಶಾಸಕರಾಗಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕರಾಗಿ, ಮುಖ್ಯಮಂತ್ರಿಯಾಗಿ ಸುದೀರ್ಘವಾಗಿ ಜನಪರವಾದಂತಹ ಕಾರ್ಯಗಳನ್ನು ಮಾಡಿದ್ದಾರೆ. ಅಲ್ಲದೆ, ಎಷ್ಟೇ ಕೆಲಸ ಕಾರ್ಯಗಳು ಇದ್ದರೂ ಶಾಸನ ಸಭೆ ನಡೆಯುತ್ತಿರುವ ಸಂದರ್ಭದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತಾರೆ. ಎಲ್ಲರ ಅಭಿಪ್ರಾಯಗಳನ್ನು ಆಲಿಸಿ ಸ್ಪಷ್ಟ ನಿಲುವುಗಳನ್ನು ತೆಗೆದುಕೊಳ್ಳುತ್ತಾರೆ. ಹೀಗಾಗಿ ಅವರ ಸೇವೆಯನ್ನು ಗಮನಿಸಿ ಮೊದಲ ಪ್ರಶಸ್ತಿಗೆ ಅವರನ್ನು ಸಮಿತಿಯು ಆಯ್ಕೆ ಮಾಡಿದೆ ಎಂದರು.